8 74

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರು ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ.**

**ಪ್ರಶ್ನೆ:**

ಸರ್ಕಾರದಿಂದ ನಿಜಶರಣ ಅಂಬಿಗರ ಚೌಡಯ್ಯರವರ ಪ್ರತಿಮೆಯನ್ನು ಸ್ಥಾಪಿಸಬೇಕೆನ್ನುವ ಬೇಡಿಕೆಯು ಸಮುದಾಯದ ಮತ್ತು ಎಲ್ಲ ಸಮಾಜದವರ ಬೇಡಿಕೆಯಾಗಿದ್ದರೂ ಸರ್ಕಾರ ತೀರ್ಮಾನ ಕೈಗೊಳ್ಳುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಹೇಳಿಕೆ :**

ಹನ್ನೆರಡನೇ ಶತಮಾನದ ಸಾಮಾಜಿಕ, ಕ್ರಾಂತಿಯ ಹರಿಕಾರರಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಒಬ್ಬರು. ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವದ ಅಂಬಿಗರ ಚೌಡಯ್ಯನವರು ನೇರ ನಿರ್ಭೀತ ನುಡಿಗಳಿಗೆ ಪ್ರಸಿದ್ಧರು. ಅಂಬಿಗರ ಚೌಡಯ್ಯ ಎಂಬ ಅಂಕಿತನಾಮದಿಂದಲೇ ವಚನಗಳನ್ನು ರಚಿಸಿರುತ್ತಾರೆ.

ಬೆಂಗಳೂರಿನ ಚಾಲುಕ್ಯ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಯ ಪಕ್ಕದಲ್ಲಿರುವ ಜವಹಾರ್ ಲಾಲ್ ನೆಹರೂ ಪ್ಲಾನಿಟೋರಿಯಂಗೆ ಹೊಂದಿಕೊಂಡಿರುವ ಸ್ಥಳದಲ್ಲಿ ವಿಶ್ವಗುರು ಶ್ರೀ ನಿಜಗುಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆಗೆ ಸಂಬಂಧಿಸಿದಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾಪ್ರ 564 ಕಸಧ 2012, ದಿನಾಂಕ:11.06.2012ರನ್ವಯ "ಸರ್ಕಾರದ / ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ / ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಯನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿದೆ".

ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾದ SLP(C) ಸಂಖ್ಯೆ 8519/2006ರ ಪ್ರಕರಣದಲ್ಲಿ, ಮಾನ್ಯ ನ್ಯಾಯಾಲಯವು ದಿನಾಂಕ:18.01.2013ರಂದು ನೀಡಿರುವ ತೀರ್ಪಿನಲ್ಲಿರುವ ಒಂದು ಅಂಶವು ಈ ಕೆಳಕಂಡಂತೆ ಇರುತ್ತದೆ.

> "......State Government shall not grant any permission for installation of any statue or construction of any structure in public roads, pavements, sideways and other public utility places".

ಮೇಲ್ಕಂಡ ಸುತ್ತೋಲೆ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ಸಾರ್ವಜನಿಕ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆಗೆ ಅವಕಾಶವಿರುವುದಿಲ್ಲ.

ಆದಾಗ್ಯೂ, ಬೆಳಗಾವಿಯ ಸುವರ್ಣ ಸೌಧ ಕಟ್ಟಡದ ಮುಂದೆ ಹಾಗೂ ಬೆಂಗಳೂರಿನ ಪ್ರತಿಷ್ಠಿತ ಜನಪ್ರಿಯ ಸ್ಥಳದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಕಸಂವಾ 111 ಕವಿಸ 2025

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು